## ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ : ಕೇಂದ್ರ ಕಛೇರಿ : ಬೆಂಗಳೂರು-27

ಸಂ:ಕರಾಸಾ:ಕೇಕ:ಸಂ:ವಾ:ಸಿ2: ೩೩೯೩:2019-20 ದಿನಾಂಕ 19-02-2020

### ಸುತ್ತೋಲೆ

ವಿಷಯ : ದ್ವಿತೀಯ ಪಿ.ಯು.ಸಿ ವಿದ್ಯಾರ್ಥಿಗಳಿಗೆ ಪರೀಕ್ಷೆಗಳು ನಡೆಯುವ ಅವಧಿಯಲ್ಲಿ ಪರೀಕ್ಷಾ ಪ್ರವೇಶ ಪತ್ರದೊಂದಿಗೆ ಪರೀಕ್ಷಾ ಕೇಂದ್ರಗಳವರೆಗೆ ನಿಗಮದ ಬಸ್‌ಗಳಲ್ಲಿ ಪ್ರಯಾಣಿಸಲು ಅನುಮತಿಸುವ ಬಗ್ಗೆ.

ಉಲ್ಲೇಖ: 1. ಸನ್ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರ ಟಿಪ್ಪಣಿ ಸಂ:1661/20-21 ದಿನಾಂಕ: 19.02.2020.

2. ಮಾನ್ಯ ಪ್ರಾಥಮಿಕ & ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಟಿಪ್ಪಣಿ ಸಂ:2002/19-20 ದಿನಾಂಕ: 15.02.2020.

3. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆರವರ ಪತ್ರ ಸಂ. ಪಪೂಶಿಇ/ಪರೀಕ್ಷೆ/ಮಾದ್ವಿಪಿಪ/ 2020 ದಿನಾಂಕ: 11.02.2020.

****

ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ದಿನಾಂಕ 04.03.2020 ರಿಂದ ಕರ್ನಾಟಕದ ದ್ವಿತೀಯ ಪಿ.ಯು.ಸಿ ವಿದ್ಯಾರ್ಥಿಗಳಿಗೆ ಅಂತಿಮ ಪರೀಕ್ಷೆಗಳು ಪ್ರಾರಂಭವಾಗಲಿವೆ. ಈ ಸಂಬಂಧ ವಿದ್ಯಾರ್ಥಿಗಳಿಗೆ ಅವರ ವಿದ್ಯಾಸಂಸ್ಥೆಯ ಹೊರತಾಗಿ ಇತರೆ ವಿದ್ಯಾಸಂಸ್ಥೆಗಳಿಗೆ ಪರೀಕ್ಷಾ ಕೇಂದ್ರಗಳ ನಿಯೋಜನೆಯಾಗಿರುವುದರಿಂದ, ಪರೀಕ್ಷಾ ಅವಧಿಯಲ್ಲಿ ವಿದ್ಯಾರ್ಥಿಗಳಿಗೆ ವಾಸಸ್ಥಳದಿಂದ ಪರೀಕ್ಷಾ ಕೇಂದ್ರಗಳವರೆಗೆ ನಿಗಮದ ಬಸ್ಸುಗಳಲ್ಲಿ ಉಚಿತವಾಗಿ ಪ್ರಯಾಣಿಸಲು ಅನುಮತಿಸುವಂತೆ ಉಲ್ಲೇಖಿತ ಪತ್ರದಲ್ಲಿ ಸನ್ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರನ್ನು ಮಾನ್ಯ ಪ್ರಾಥಮಿಕ & ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು ಕೋರಿರುತ್ತಾರೆ ಹಾಗೂ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ರವರು ಸಹ ನಿಗಮಕ್ಕೆ ಪತ್ರವನ್ನು ನೀಡಿರುತ್ತಾರೆ.

ಅದರನ್ವಯ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ, ಕ.ರಾ.ರ.ಸಾ.ನಿಗಮವು, ದ್ವಿತೀಯ ಪಿಯುಸಿ ಪರೀಕ್ಷೆ ನಡೆಯುವ ದಿನಾಂಕಗಳಲ್ಲಿ ಅಂದರೆ **ದಿನಾಂಕ 04-03-2020 ರಿಂದ 23-03-2020 ರವರೆಗೆ** ಪರೀಕ್ಷೆಗೆ ಹಾಜರಾಗುವ ಎಲ್ಲಾ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳು ತಮ್ಮ ವಾಸಸ್ಥಳದಿಂದ ನಿಯೋಜಿತ ಪರೀಕ್ಷಾ ಕೇಂದ್ರದವರೆಗೆ ಮತ್ತು ಹಿಂದಿರುಗುವಾಗ "ದ್ವಿತೀಯ ಪಿಯುಸಿ ಪರೀಕ್ಷಾ ಪ್ರವೇಶ ಪತ್ರವನ್ನು" ತೋರಿಸಿ, ನಿಗಮದ ನಗರ, ಹೊರವಲಯ, ಸಾಮಾನ್ಯ ಹಾಗೂ ವೇಗದೂತ ಬಸ್ಸುಗಳಲ್ಲಿ ಉಚಿತವಾಗಿ ಪ್ರಯಾಣಿಸಲು ಅವಕಾಶ ಕಲ್ಪಿಸಲಾಗಿದೆ.

ಈ ಸಂಬಂಧ, ನಿಗಮದ ಎಲ್ಲಾ ಚಾಲಕ / ನಿರ್ವಾಹಕರುಗಳಿಗೆ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಪರೀಕ್ಷಾ ಅವಧಿಯಲ್ಲಿ ನಿಯೋಜಿತ ಪರೀಕ್ಷಾ ಕೇಂದ್ರಗಳಿಗೆ ತೆರಳಲು ಹಾಗೂ ವಾಸಸ್ಥಳಕ್ಕೆ ಮರಳಲು ಪರೀಕ್ಷಾ ಪ್ರವೇಶ ಪತ್ರದೊಂದಿಗೆ ಪ್ರಯಾಣಿಸಲು ಅನುಮತಿಸಲು ಸೂಕ್ತ ತಿಳುವಳಿಕೆ ನೀಡಲು ಸೂಚಿಸಲಾಗಿದೆ. ಮುಂದುವರೆದು, ಪ್ರವೇಶ ಪತ್ರದ ಆಧಾರದ ಮೇಲೆ ಬಸ್ಸು ಆಚರಣೆ ಮಾರ್ಗದಲ್ಲಿ ಪರೀಕ್ಷಾ ಕೇಂದ್ರಗಳಿಗೆ ತೆರಳಲು ವಿದ್ಯಾರ್ಥಿಗಳು ಬಸ್ಸನ್ನು ಹತ್ತುವವರಿದ್ದಲ್ಲಿ ಹಾಗೂ ಆಚರಣಾ ಮಾರ್ಗದಲ್ಲಿ ಪರೀಕ್ಷಾ ಕೇಂದ್ರಗಳಿದ್ದಲ್ಲಿ, ವಿದ್ಯಾರ್ಥಿಗಳು ಬಸ್ಸನ್ನು ಹತ್ತಲು / ಇಳಿಯಲು ಅನುಕೂಲವಾಗುವಂತೆ ಕೋರಿಕೆ ನಿಲುಗಡೆ ನೀಡಲು ಕ್ರಮ ಕೈಗೊಳ್ಳುವುದು.

ಚಾಲನಾ ಸಿಬ್ಬಂದಿಗಳು ಮೇಲ್ಕಂಡ ನಿರ್ದೇಶನಗಳನ್ನು ತಪ್ಪದೇ ಪಾಲಿಸುವುದು.

ಈ ಸುತ್ತೋಲೆಯನ್ನು ಎಲ್ಲಾ ಘಟಕ ಹಾಗೂ ಬಸ್ ನಿಲ್ದಾಣಗಳ ಸೂಚನಾ ಫಲಕಗಳಲ್ಲಿ ಪ್ರದರ್ಶಿಸಿ ಮೇಲ್ಕಂಡ ನಿರ್ದೇಶನಗಳನ್ನು ಜಾರಿಗೊಳಿಸಲು ಕ್ರಮ ವಹಿಸುವುದು.

(ಶಿವಯೋಗಿ ಸಿ. ಕಳಸದ, ಭಾ.ಆ.ಸೇ)
ವ್ಯವಸ್ಥಾಪಕ ನಿರ್ದೇಶಕರು
ಕರಾರಸಾ ನಿಗಮ

Scanned by CamScanner